ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1187
ವಿಧಾನ ಪರಿಷತ್ ಸದಸ್ಯರ ಹೆಸರು	:	ಶ್ರೀ ಎಂ.ಎ ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವವರು	:	ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು
ಉತ್ತರಿಸಬೇಕಾದ ದಿನಾಂಕ	:	16.03.2021

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದ ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರವು ರೂಪಿಸಿರುವ ಯೋಜನೆಗಳು ಯಾವುವು; ಕಳೆದ ಮೂರು ವರ್ಷಗಳಲ್ಲಿ ಯೋಜನೆಗಳಡಿ ಹಾಸನ ಜಿಲ್ಲೆಯಲ್ಲಿ ಸ್ಥಾಪನೆಯಾದ ಸಣ್ಣ ಕೈಗಾರಿಕೆಗಳಾವುವು, (ಆದೇಶದ ಪ್ರತಿಯೊಂದಿಗೆ ಸಂಪೂರ್ಣ ಮಾಹಿತಿಯನ್ನು ನೀಡುವುದು)	ರಾಜ್ಯದ ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರವು ರೂಪಿಸಿರುವ ಯೋಜನೆಗಳು ಈ ಕೆಳಗಿನಂತಿವೆ: 1. ಕೇಂದ್ರ ಸರ್ಕಾರದ ಪ್ರಧಾನಮಂತ್ರಿಗಳ ಉದ್ಯೋಗ ಸೃಜನ ಯೋಜನೆಯಡಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಗರಿಷ್ಠ ಸಾಲ ರೂ.25.00 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು ಹಾಗೂ ಯೋಜನಾ ವೆಚ್ಚದ ಮೇಲೆ ಶೇ.15 ರಿಂದ ಶೇ.35 ರವರೆಗೆ ಗರಿಷ್ಠ ರೂ.3.75 ಲಕ್ಷದಿಂದ ರೂ.8.75 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ. 2. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳು ಸ್ಥಾಪಿಸಲು ರೂ.5.00 ಕೋಟಿಗಳವರೆಗೆ ಸಾಲ ಪಡೆದು ನಿಗದಿತ ಸಮಯದಲ್ಲಿ ಮರುಪಾವತಿ ಮಾಡಿದ ಅತಿ ಸಣ್ಣ ಮತ್ತು ಸಣ್ಣ ಕೈಗಾರಿಕಾ ಘಟಕಗಳಿಗೆ 5 ವರ್ಷಗಳ ಅವಧಿಗೆ ಶೇ.6 ರಂತೆ ಬಡ್ಡಿ ಸಹಾಯಧನ ನೀಡಲಾಗುವುದು. 3. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಶೇ.75 ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನಗಳನ್ನು (ಗರಿಷ್ಠ 2 ಎಕರೆ) ಮತ್ತು ಕೈಗಾರಿಕಾ ಶೆಡ್‌ಗಳನ್ನು ನೀಡಲಾಗುತ್ತಿದೆ. 4. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪ ಯೋಜನೆ ಯಡಿಯಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಗರಿಷ್ಠ ರೂ.10.00 ಲಕ್ಷ ಯೋಜನಾ ವೆಚ್ಚದ ಮೇಲೆ ಶೇ.60 ರಷ್ಟು ಗರಿಷ್ಠ ರೂ.5.00 ಲಕ್ಷ ಸಹಾಯಧನ ನೀಡಲಾಗುತ್ತಿದೆ. 5. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಮೊದಲ ಪೀಳಿಗೆಯ ಉದ್ಯಮಿದಾರರು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು ಸ್ಥಾಪಿಸುವ ಹೊಸ ಘಟಕಗಳಿಗೆ ಗರಿಷ್ಠ ರೂ.2.00 ಕೋಟಿ ಯೋಜನಾ ವೆಚ್ಚದಲ್ಲಿ The Debt Equity Ratio 2:1 ಪ್ರಕಾರ (2/3 ರಷ್ಟು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಮತ್ತು 1/3 ಪ್ರವರ್ತಕರ ಬಂಡವಾಳ)ಘಟಕಕ್ಕೆ ಪ್ರವರ್ತಕ ಬಂಡವಾಳ ಹೂಡಿಕೆಯ 1/3 ರಲ್ಲಿ ಶೇ.50 ರಷ್ಟು ಬಡ್ಡಿರಹಿತ ಗರಿಷ್ಠ ರೂ.33.00 ಲಕ್ಷ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ನೀಡಲಾಗುತ್ತಿದೆ.

		• ಮುಖ್ಯಮಂತ್ರಿಯವರ ಸ್ವಯಂ ಉದ್ಯೋಗ ಸೃಜನೆ ಯೋಜನೆಯಡಿಯಲ್ಲಿ ಸ್ಥಾಪನೆಗೊಂಡ ಘಟಕಗಳಿಗೆ ಸಂಬಂಧಿಸಿದ ಆದೇಶಗಳನ್ನು ಲಗತ್ತಿಸಲಾಗಿದೆ. • ಪ್ರಧಾನಮಂತ್ರಿಯವರ ಉದ್ಯೋಗ ಸೃಜನೆ ಕೇಂದ್ರ ಸರ್ಕಾರದ ಯೋಜನೆಯಾಗಿದ್ದು ಇದಕ್ಕೆ ಸಂಬಂಧಿಸಿದಂತೆ ಅನುದಾನ ಆನ್‌ಲೈನ್ ಮೂಲಕ ಬ್ಯಾಂಕ್‌ಗಳಿಗೆ ಮಾಹಿತಿ ರವಾನೆ ಆಗುವುದರಿಂದ ಸಂಬಂಧಿಸಿದ ಆದೇಶಗಳು ಇರುವುದಿಲ್ಲ. ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ ಯಾವುದೇ ಆದೇಶ ಪಡೆದು ಸ್ಥಾಪಿಸುವ ಅಗತ್ಯವಿಲ್ಲ. ಆ ಕೈಗಾರಿಕೆಗಳು ಸ್ಥಾಪನೆಯಾದ ಬಗ್ಗೆ ಅಂತರ್ಜಾಲ ತಾಣದಲ್ಲಿ ತಮ್ಮ ವಿವರಗಳನ್ನು ಸರ್ಕಾರಕ್ಕೆ ಸಲ್ಲಿಸಿ ಸ್ವೀಕೃತಿಯನ್ನು ಮಾತ್ರ ಪಡೆಯಬೇಕಾಗುತ್ತದೆ.
ಆ)	ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಯಾವ ಯಾವ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಅವಕಾಶಗಳಿವೆ; ಮತ್ತು ಸಣ್ಣ ಕೈಗಾರಿಕೆಗಳ ಒಂದು ಕೈಗಾರಿಕಾ ಪ್ರದೇಶ ಸ್ಥಾಪಿಸಲು ಇರುವಂತಹ ಮಾನದಂಡಗಳೇನು; (ಸಂಪೂರ್ಣ ವಿವರ ನೀಡುವುದು)	ಹಾಸನ ಜಿಲ್ಲೆಯಲ್ಲಿ ಈ ಕೆಳಗಿನ ವಲಯದ ಕೈಗಾರಿಕೆಗಳನ್ನು ಸ್ಥಾಪಿಸಲು ಸೂಕ್ತವಾಗಿರುತ್ತದೆ: 1. ಆಹಾರ ಆಧಾರಿತ 2. ಟೆಕ್ಸ್‌ಟೈಲ್ಸ್ ಆಧಾರಿತ 3. ಗ್ರಾನೆಟ್ ಕಲ್ಲು ಆಧಾರಿತ 4. ಜನರಲ್ ಇಂಜಿನಿಯರಿಂಗ್ 5. ತೆಂಗಿನ ನಾರಿನ ಉತ್ಪನ್ನಗಳು 6. ಕಾಫಿ ಪುಡಿ ತಯಾರಿಕಾ ಘಟಕಗಳು 7. ಮರದ ಪೀಠೋಪಕರಣಗಳು 8. ಕಟ್ಟಡ ಸಾಮಾಗ್ರಿಗಳು 9. ಜೆಲ್ಲಿ ಕಲ್ಲು ತಯಾರಿಕೆ 10. ಸಿಮೆಂಟ್ ಹಾಲೋಬ್ರಿಕ್ಸ್ 11. ಕೆಮಿಕಲ್ಸ್ ಇಂಡಸ್ಟ್ರೀಸ್ 12. ಆಯುರ್ವೇದ ಔಷಧಿಗಳ ತಯಾರಿಕೆ ಕೈಗಾರಿಕಾ ಪ್ರದೇಶಗಳನ್ನು ಸ್ಥಾಪಿಸಲು ಮೊದಲಿಗೆ ಬೇಡಿಕೆ ಸಮೀಕ್ಷೆ ನಡೆಸಲಾಗುತ್ತದೆ. ಉದ್ದೇಶಿತ ಪ್ರದೇಶವು ಸಂಬಂಧಪಟ್ಟ ಯೋಜನಾ ಪ್ರಾಧಿಕಾರದ ಮಾಸ್ಟರ್ ಪ್ಲಾನ್‌ನಲ್ಲಿ ಕೈಗಾರಿಕಾ ವಲಯದಲ್ಲಿ ಇರಬೇಕು. ಸದರಿ ಕೈಗಾರಿಕಾ ಪ್ರದೇಶಕ್ಕೆ ರಸ್ತೆ ಸಂಪರ್ಕ, ವಿದ್ಯುತ್ ಸಂಪರ್ಕ ಹಾಗೂ ನೀರು ಸರಬರಾಜು ಲಭ್ಯವಾಗುವಂತಿರಬೇಕು. ಕೈಗಾರಿಕಾ ಪ್ರದೇಶದಲ್ಲಿ ಉದ್ದೇಶಿತ ಉತ್ಪನ್ನಗಳಿಗನುಗುಣವಾಗಿ ಕೇಂದ್ರ/ ರಾಜ್ಯ ಸರ್ಕಾರದಿಂದ ಪರಿಸರ ಅನುಮೋದನೆ ಪಡೆಯಬೇಕು. ಕೈಗಾರಿಕಾ ಪ್ರದೇಶಕ್ಕೆ ಬೇಕಾದ ಜಮೀನನ್ನು ಕೆಐಎಡಿಬಿ ಸಂಸ್ಥೆಯು ಸ್ವಾದೀನ ಪಡಿಸಿ ನೀಡುತ್ತದೆ.
ಇ)	ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗದವರು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರದ ವತಿಯಿಂದ ಯಾವ ಯಾವ ಯೋಜನೆಗಳನ್ನು ರೂಪಿಸಿ ಅವರಿಗೆ ಸಾಲ ಸೌಲಭ್ಯ, ಸಹಾಯಧನ	ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಮತ್ತು ಹಿಂದುಳಿದ ವರ್ಗದವರಿಗೆ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರದ ವತಿಯಿಂದ ಈ ಕೆಳಗಿನ ಯೋಜನೆಗಳನ್ನು ರೂಪಿಸಿ ಅವರಿಗೆ ಸಾಲ ಸೌಲಭ್ಯ, ಸಹಾಯ ಧನ ನೀಡಲಾಗುತ್ತಿದೆ: ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಮತ್ತು ಹಿಂದುಳಿದ ವರ್ಗದವರಿಗೆ ಹಾಗೂ ಇತರೆ ವರ್ಗದವರಿಗೆ:

		3. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಶೇ.75 ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನಗಳನ್ನು (ಗರಿಷ್ಟ 2 ಎಕರೆ) ಮತ್ತು ಕೈಗಾರಿಕಾ ಶೆಡ್‌ಗಳನ್ನು ನೀಡಲಾಗುತ್ತಿದೆ.

ಸಿಐ 47 ಎಸ್‌ಎಸ್‌ಐ 2021

(ಸಿ.ಸಿ ಪಾಟೀಲ್)
ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು
ಸಾರ್ವಜನಿಕ ಸಂಪರ್ಕ ಸಚಿವರು